# ಶಾಸಕರ ಅನರ್ಹತೆ ಸುಪ್ರೀಂ ಮಾನ್ಯತೆ ವಿಶ್ವಾಸ

ಸಂ. ಕ. 2-10-19

ರಾಯಚೂರು: ಎಲ್ಲ ಶಾಸಕರ ಒಂದೇ ಬಾರಿಗೆ ರಾಜೀನಾಮೆ ನೀಡಲು, ಅವರೆಲ್ಲರಿಗೂ ಒಂದೇ ಬಾರಿ ಅಂಥ ಸಂಕಷ್ಟ ಬಂದಿತ್ತಾ. ಸ್ಪೀಕರ್ ಆಗಿದ್ದ ರಮೇಶಕುಮಾರ್ ಅವರ ಆದೇಶವನ್ನು ಪ್ರಶ್ನಿಸಿ ಅನರ್ಹಗೊಂಡಿರುವ ಶಾಸಕರು ಸುಪ್ರೀಂಕೋರ್ಟ್ ಮೊರೆ ಹೋಗಿದ್ದಾರೆ. ಸ್ಪೀಕರ್ ಆದೇಶವನ್ನು ಸುಪ್ರೀಂಕೋರ್ಟ್ ಎತ್ತಿ ಹಿಡಿಯುತ್ತದೆ ಎಂಬ ವಿಶ್ವಾಸ ನನಗಿದೆ ಎಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ ಪಕ್ಷ ಸೇರ್ಪಡೆ ಉದ್ದೇಶಕ್ಕಾಗಿ ಪಕ್ಷಕ್ಕೆ ರಾಜೀನಾಮೆ ನೀಡಿದ ಶಾಸಕರ ವಿರುದ್ಧ ಅನರ್ಹ ಅಸ್ತ್ರ ಬಳಕೆ ಮಾಡಲಾಗಿದೆ. ಬಿಎಸ್‌ವೈ ಪ್ರಮಾಣ ವಚನ ಸ್ವೀಕರಿಸುವ ಸಂದರ್ಭದಲ್ಲಿ ಅನರ್ಹ ಶಾಸಕರಿಗೆ ಸಚಿವ ಸ್ಥಾನ ಹಾಗೂ ಟಿಕೆಟ್ ನೀಡಲಾಗುವುದು ಎಂದು ಯಡಿಯೂರಪ್ಪ ಅವರು ಹೇಳಿದ್ದರು. ಆದರೆ, ಈಗ ಅವರು ಎಲ್ಲಿದ್ದಾರೆ ಎಂದು ಪ್ರಶ್ನಿಸಿದರು. ಅನರ್ಹ ಶಾಸಕರು, ಸಚಿವ ಕೆ.ಎಸ್. ಈಶ್ವರಪ್ಪ ಬಗ್ಗೆ ಮಾತನಾಡುವುದಿಲ್ಲ. ಶಾಸಕರನ್ನು ಕಾನೂನು ಪ್ರಕಾರ ಅನರ್ಹಗೊಳಿಸಲಾಗಿದೆ. ಪುನಃ ಕಾಂಗ್ರೆಸ್ ಪಕ್ಷಗೆ ಬರುತ್ತೇನೆ ಎಂದು ಅನರ್ಹ ಶಾಸಕ ಕೇಳಿಕೊಂಡರೂ ಕರೆದುಕೊಳ್ಳುವುದಿಲ್ಲ ಎಂದು ಹೇಳಿದರು.

5